**ಕರ್ನಾಟಕ ಸರ್ಕಾರ**

**ಕಂದಾಯ ಇಲಾಖೆ**

**ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ**

---

ವಿಷಯ:- ಕರೋನ ವೈರಸ್ ಹರಡಂತೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಠಿಯಿಂದ ದಿ:20-04-2020 ರವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ನಿಷೇಧಿಸಿ ಆದೇಶ ಹೊರಡಿಸುವುದನ್ನು ಮುಂದುವರೆಸುವ ಬಗ್ಗೆ.

ಉಲ್ಲೇಖ:
1) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಬೆಂಗಳೂರು ರವರ ಆದೇಶ ಸಂ:ಡಿಡಿ/ಎಸ್.ಎಸ್.ಯು/ಕೋವಿಡ್-19/17/19-20 ದಿ:13-03-2020.
2) ಅಬಕಾರಿ ಆಯುಕ್ತರು, ಬೆಂಗಳೂರು ರವರ ಆದೇಶ ಸಂಖ್ಯೆ: ಇಸಿಇ/04/ಜ.ಕ್ರೈಂ/2019-20 ದಿ:14-04-2020 ಮತ್ತು 19-04-2020.
3) ಈ ಕಚೇರಿಯ ಸಮ ಸಂಖ್ಯೆ ಆದೇಶ ದಿನಾಂಕ:14-04-2020.

$$$$$$$$

**ಪ್ರಸ್ತಾವನೆ:**

ಉಲ್ಲೇಖ(1) ರಲ್ಲಿ ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಬೆಂಗಳೂರು ಇವರು ಉಲ್ಲೇಖಿತ ಪತ್ರದಲ್ಲಿ ಸಾರ್ವಜನಿಕರ ಹಿತದೃಷ್ಠಿಯಿಂದ ಕರೋನ ಸೋಂಕು ಹರಡುವುದನ್ನು ತಡೆಗಟ್ಟುವ ಕುರಿತು ಕೆಲವೊಂದು ಕ್ರಮಗಳನ್ನು ಕೈಗೊಳ್ಳಲು ಆದೇಶಿಸಿರುತ್ತಾರೆ.

ಕರೋನ ವೈರಸ್ ಸೋಂಕು ಒಬ್ಬರಿಂದ ಒಬ್ಬರಿಗೆ ಹರಡುವಂತಹ ಸಾಧ್ಯತೆಗಳಿದ್ದು, ಇಂತಹ ಸಂದರ್ಭಗಳಲ್ಲಿ ಕರೋನ ವೈರಸ್ ಸೋಂಕು ಹರಡದಂತೆ ಸಾರ್ವಜನಿಕರ ಹಿತದೃಷ್ಠಿಯಿಂದ ಪರಿಣಾಮಕಾರಿಯಾಗಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಉಲ್ಲೇಖ(3) ರ ಆದೇಶದಲ್ಲಿ ದಿ:20-04-2020 ರ ಮಧ್ಯರಾತ್ರಿ 12=00 ಗಂಟೆವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚಲು ಆದೇಶಿಸಲಾಗಿರುತ್ತದೆ.

ಮುಂದುವರೆದು ದಿ:03-05-2020 ರವರೆಗೆ ಭಾರತದಾದ್ಯಂತ ಲಾಕ್‌ಡೌನ್ ಮುಂದುವರೆಸಿರುವ ಹಿನ್ನಲೆಯಲ್ಲಿ ಹಾಗೂ ಉಲ್ಲೇಖ(2)ರಲ್ಲಿ ಮಾನ್ಯ ಅಬಕಾರಿ ಆಯುಕ್ತರು, ಬೆಂಗಳೂರು ರವರು ದಿ:03-05-2020 ರವರೆಗೆ ಎಲ್ಲಾ ಮದ್ಯದ ಸನ್ನದುಗಳನ್ನು ಮುಚ್ಚಲು ಆದೇಶಿಸಿರುತ್ತಾರೆ. ಆದ್ದರಿಂದ ಚಿತ್ರದುರ್ಗ ಜಿಲ್ಲೆಯ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚಲು ಆದೇಶಿಸುವುದು ಅವಶ್ಯಕವಾಗಿರುತ್ತದೆಂದು ನನಗೆ ಮನವರಿಕೆಯಾಗಿರುವುದರಿಂದ ಈ ಕೆಳಕಂಡಂತೆ ಆದೇಶಿಸಿದೆ.

**:ಆದೇಶ:**

**ಸಂಖ್ಯೆಎಂ.ಎಜಿ(3) ಸಿಆರ್- 144/2019-20** **ದಿನಾಂಕ:19-04-2020.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ ಆರ್.ವಿನೋತ್ ಪ್ರಿಯಾ, ಭಾ.ಆ.ಸೇ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ಚಿತ್ರದುರ್ಗ ಜಿಲ್ಲೆ ಆದ ನಾನು ಚಿತ್ರದುರ್ಗ ಜಿಲ್ಲೆಯಾದ್ಯಂತ ಕೋವಿಡ್-2019 ಕರೋನಾ ವೈರಸ್ ಸೋಂಕು ಹರಡದಂತೆ ಸಾರ್ವಜನಿಕರ ಹಿತದೃಷ್ಠಿಯಿಂದ ಪರಿಣಾಮಕಾರಿಯಾಗಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21(1)ರ ಮೇರೆಗೆ **ದಿ:20-04-2020** ರ **ಮಧ್ಯರಾತ್ರಿ 12-00 ಗಂಟೆಯಿಂದ ದಿ:03-05-2020 ರ ಮಧ್ಯರಾತ್ರಿ 12-00 ಗಂಟೆವರೆಗೆ** ಚಿತ್ರದುರ್ಗ ಜಿಲ್ಲೆಯಾದ್ಯಂತ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚಲು ಆದೇಶಿಸಿರುತ್ತೇನೆ.

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :-**

1) ಅಬಕಾರಿ ಜಂಟಿ ಆಯುಕ್ತರು (ಜಾರಿ ಮತ್ತು ತನಿಖೆ) ಬೆಂಗಳೂರು ವಿಭಾಗ ಹಾಗೂ ರಾಜ್ಯ ವಿಚಕ್ಷಣ ದಳ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
2) ಅಬಕಾರಿ ಆಯುಕ್ತರು, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
3) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.

--2

Scanned by CamScanner

4) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7) ಅಬಕಾರಿ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
8) ಅಬಕಾರಿ ಉಪ ಅಧೀಕ್ಷಕರು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ.
9) ಜಿಲ್ಲೆಯ ಎಲ್ಲಾ ತಾಲ್ಲೂಕಿನ ವಲಯ/ಜಾರಿ ಮತ್ತು ತನಿಖೆ ಕಛೇರಿಗಳ ಅಬಕಾರಿ ನಿರೀಕ್ಷಕರು/ ಉಪನಿರೀಕ್ಷಕರುಗಳಿಗೆ.
10) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

Scanned by CamScanner